ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

(5)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಕಲಾಪಗಳು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 7/3/21

# ಕೋರ್ಟ್ ಮೆಟ್ಟಿಲೇರಿದ್ದು ಏಕೆ: ಸಿದ್ದರಾಮಯ್ಯ ಪ್ರಶ್ನೆ

ಪ್ರಜಾವಾಣಿ ವಾರ್ತೆ



ಸಿದ್ದರಾಮಯ್ಯ

ಬೆಂಗಳೂರು: 'ಕೋರ್ಟ್ ಮೆಟ್ಟಿಲು ಹತ್ತುತ್ತಿದ್ದಾರೆ ಎಂದರೆ ಅವರಿಗೆ ತಮ್ಮ ವಿರುದ್ಧ ಸಿ.ಡಿ ಇದೆ ಎಂಬುದು ಗೊತ್ತಿರಬೇಕಲ್ಲ' ಎಂದು ವಿಧಾನ ಸಭೆಯ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಆರು ಸಚಿವರು ಕೋರ್ಟ್ ಮೊರೆ ಹೋಗಿರುವ ಬಗ್ಗೆ ಖಾರವಾಗಿ ಪ್ರತಿಕ್ರಿಯಿಸಿದ ಅವರು, 'ಮೈತ್ರಿ ಸರ್ಕಾರವನ್ನು ಬೀಳಿಸಿ ಹೋದವರ ಮೇಲೆ ಮತ್ತು ಪಕ್ಷದ್ರೋಹ ಮಾಡಿದವರ ಮೇಲೆ ಅನುಕಂಪ ಬರಲು ಸಾಧ್ಯವಾ?' ಎಂದು ಹೇಳಿದರು.

> ಇದೇನು ಸಿ.ಡಿ ಸರ್ಕಾರನಾ ಅಥವಾ ಸಿ.ಡಿಗಳನ್ನು ಇಟ್ಟುಕೊಂಡು ಇವರು ಸರ್ಕಾರ ನಡೆಸುತ್ತಿದ್ದಾರಾ. ಸಿ.ಡಿ ಪ್ರಕರಣದ ಬಗ್ಗೆ ಹೈಕೋರ್ಟ್ ನ್ಯಾಯಮೂರ್ತಿಗಳಿಂದ ತನಿಖೆ ನಡೆಸಬೇಕು
>
> **ಸಂಕೇತ್ ಏಣಗಿ**, ಕೆಪಿಸಿಸಿ ವಕ್ತಾರ

'ಜನರು ಹೇಸಿಗೆ ಪಡುವಂಥ ಸ್ಥಿತಿಗೆ ರಾಜಕಾರಣ ಬಂದಿದೆ. ಯಾರೋ ಮಾಡುವ ತಪ್ಪಿಗೆ ಎಲ್ಲ ರಾಜಕಾರಣಿಗಳನ್ನು ಅನುಮಾನದಿಂದ ನೋಡುವಂತಾಗಿದೆ. ರಾಜಕಾರಣಿಗಳೆಂದರೆ ಹೀಗೆಯೇ ಎಂದು ನೋಡುವ ಪರಿಸ್ಥಿತಿ ನಿರ್ಮಾಣವಾಗಿದೆ' ಎಂದು ವಿಷಾದ ವ್ಯಕ್ತಪಡಿಸಿದರು.